**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 969 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:20-11-2018.

**ಸುತ್ತೋಲೆ**

ವಿಷಯ: ಚುನಾಯಿತಿ ಪ್ರತಿನಿಧಿಗಳೊಂದಿಗೆ ಶಿಷ್ಟಾಚಾರದನ್ವಯ ಸೌಜನ್ಯದಿಂದ ನಡೆದುಕೊಳ್ಳುವ ಬಗ್ಗೆ.

****

ಪ್ರಜಾಪ್ರಭುತ್ವದಲ್ಲಿ ಚುನಾಯಿತ ಪ್ರತಿನಿಧಿಗಳಾದ ಸಂಸತ್ತು ಸದಸ್ಯರು (ಲೋಕ ಸಭಾ ಮತ್ತು ರಾಜ್ಯ ಸಭಾ ಸದಸ್ಯರು) ಮತ್ತು ರಾಜ್ಯ ವಿಧಾನ ಮಂಡಲದ ಸದಸ್ಯರುಗಳ (ವಿಧಾನ ಸಭಾ ಮತ್ತು ವಿಧಾನ ಪರಿಷತ್ತು ಸದಸ್ಯರು) ಸ್ಥಾನವು ಮಹತ್ವ ಪೂರ್ಣವಾಗಿದ್ದು, ಅವರು ಸಾರ್ವಜನಿಕರ ಹಾಗೂ ಆಡಳಿತ ವ್ಯವಸ್ಥೆಯ ನಡುವೆ ಪ್ರಮುಖ ಕೊಂಡಿಯಾಗಿರುತ್ತಾರೆ. ಚುನಾಯಿತ ಪ್ರತಿನಿಧಿಗಳು ಸಾರ್ವಜನಿಕರ ಕಾರ್ಯಗಳನ್ನು ನಿರ್ವಹಿಸಲು ಸಂವಿಧಾನಾತ್ಮಕ ಅಧಿಕಾರಿಗಳನ್ನು ಹೊಂದಿರುತ್ತಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರಾಜ್ಯ ಮಟ್ಟದ ಅಧಿಕಾರಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಗ್ರಾಮ ಮಟ್ಟದ ಅಧಿಕಾರಿಗಳು ಶಿಷ್ಟಾಚಾರದನ್ವಯ ಸೌಜನ್ಯದಿಂದ ಚುನಾಯಿತ ಪ್ರತಿನಿಧಿಗಳ ಜೊತೆ ನಡೆದುಕೊಳ್ಳದಿರುವ ಬಗ್ಗೆ ದಿನಾಂಕ: 03.10.2018 ರಂದು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಅಧಿಕಾರಿಗಳೊಂದಿಗೆ ನಡೆದ ಕರ್ನಾಟಕ ವಿಧಾನ ಸಭೆಯ ಹಕ್ಕು ಬಾಧ್ಯತೆಗಳ ಸಮಿತಿಯ ಸಭೆಯಲ್ಲಿ ಈ ವಿಷಯದ ಬಗ್ಗೆ ಚರ್ಚೆ ನಡೆದು ಸಮಿತಿಯು ಗಂಭೀರವಾಗಿ ಪರಿಗಣಿಸಿರುತ್ತದೆ.

ಆದುದರಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ರಾಜ್ಯ ಮಟ್ಟದ ಅಧಿಕಾರಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಗ್ರಾಮ ಮಟ್ಟದ ಅಧಿಕಾರಿಗಳು ಶಿಷ್ಟಾಚಾರದನ್ವಯ ಸೌಜನ್ಯದಿಂದ ಚುನಾಯಿತ ಪ್ರತಿನಿಧಿಗಳ ಜೊತೆ ನಡೆದುಕೊಳ್ಳಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

1. ಚುನಾಯಿತಿ ಪ್ರತಿನಿಧಿಗಳು ಕ್ಷೇತ್ರ ಒಂದರ ಪ್ರತಿನಿಧಿ ಎಂಬ ಅಂಶವನ್ನು ಗಮನದಲ್ಲಿ ಇಟ್ಟುಕೊಂಡು ಅವರು ನೀಡುವ ಮನವಿ ಹಾಗೂ ಸಲಹೆಗಳನ್ನು ಪರಿಗಣಿಸುವುದು, ಅಲ್ಲದೇ ಸರ್ಕಾರಿ ಕಛೇರಿಗಳಿಗೆ ಭೇಟಿ ನೀಡಿದಾಗ ಅವರುಗಳಿಗೆ ಸೂಕ್ತ ಗೌರವ ನೀಡುವಂತೆ ಮತ್ತು ಸೌಜನ್ಯ ಪೂರ್ವಕವಾಗಿ ನಡೆದುಕೊಳ್ಳುವುದು.
2. ಅವರು ಏನು ಹೇಳಬಹುದು ಎಂಬುವುದನ್ನು ಎಚ್ಚರಿಕೆಯಿಂದ ಪರ್ಯಾಲೋಚಿಸಿ ಅಥವಾ ತಾಳ್ಮೆಯಿಂದ ಆಲಿಸಿ ತಮ್ಮ ಸ್ವಂತ ವಿವೇಚಾನುಸಾರವಾಗಿ ನಿಯಮಾನುಸಾರ ನಡೆದುಕೊಳ್ಳಬೇಕು.
3. ಅವರು ಭೇಟಿಗಾಗಿ ಕೋರಿದಾಗ ಆದ್ಯತೆ ಮೇಲೆ ಅವಕಾಶ ನೀಡಬೇಕಾಗಿರುತ್ತದೆ. ಅಧಿಕಾರಿಗಳನ್ನು ಭೇಟಿ ಮಾಡಲು ಗೊತ್ತುಪಡಿಸಿಕೊಂಡ ಸಂದರ್ಶನ ವ್ಯವಸ್ಥೆಯಲ್ಲಿ ಯಾವುದೇ ಅನಾನುಕೂಲತೆಯಿಂದಾಗಿ ತಪ್ಪಿಹೋದಲ್ಲಿ ಅವರೊಂದಿಗೆ ಸಮಾಲೋಚಿಸಿ ಹೊಸದಾಗಿ ಸಂದರ್ಶನ ಸಮಯವನ್ನು ನಿಗಧಿಪಡಿಸಬೇಕು.

4. ಸಂಸದರು ಮತ್ತು ಶಾಸಕರುಗಳಿಂದ ಬರುವ ದೂರವಾಣಿ ಕರೆಗಳನ್ನು ಆದ್ಯತೆ ಮೇಲೆ ಸ್ವೀಕರಿಸುವುದು. ಅವರುಗಳ ಮೂಲಕ ಬರುವ ಸಲಹೆ, ಸೂಚನೆ ಮತ್ತು ಸಾರ್ವಜನಿಕರ ಕುಂದುಕೊರತೆಗಳನ್ನು ಪರಿಹರಿಸಲು ಕೂಡಲೇ ನಿಯಮಾನುಸಾರ ಕ್ರಮ ತೆಗೆದುಕೊಳ್ಳುವುದು.
5. ಒಂದು ವೇಳೆ ನಿಯಮಗಳನ್ವಯ ಅವರ ಸಲಹೆ, ಸೂಚನೆ ಮತ್ತು ಕೋರಿಕೆಗಳನ್ನು ಅನುಷ್ಠಾನಕ್ಕೆ ತರಲು ಸಾಧ್ಯವಾಗದೇ ಇದ್ದಲ್ಲಿ, ಅಂತಹ ಕಾರಣಗಳನ್ನು ಸೌಜನ್ಯಯುತವಾಗಿ ಚುನಾಯಿತ ಪ್ರತಿನಿಧಿಗಳ ಗಮನಕ್ಕೆ ತರಬೇಕು.
6. ಚುನಾಯಿತ ಪ್ರತಿನಿಧಿಗಳಿಂದ ದೂರವಾಣಿ ಕರೆಗಳು ಸಭೆಯಲ್ಲಿದ್ದಾಗ ಬಂದಂತಹ ಸಂದರ್ಭದಲ್ಲಿ ಸಭೆ ಮುಗಿದ ನಂತರ ಕರೆಗಳನ್ನು ಕಡ್ಡಾಯವಾಗಿ ಚುನಾಯಿತ ಪ್ರತಿನಿಧಿಗಳಿಗೆ ಹಿಂದಿರುಗಿಸುವಂತೆ ಕ್ರಮ ಕೈಗೊಳ್ಳುವುದು.
7. ಚುನಾಯಿತ ಪ್ರತಿನಿಧಿಗಳು ಸರ್ಕಾರಿ ಕಛೇರಿಗಳಿಗೆ ಭೇಟಿ ನೀಡಿದಾಗ ಅವರೊಡನೆ ಜವಾಬ್ದಾರಿಯುತರಾಗಿ, ಕ್ರಿಯಾಶೀಲತೆ, ಕರ್ತವ್ಯ ಪ್ರಜ್ಞೆ,ಸೌಜನ್ಯದಿಂದ ವರ್ತಿಸುವುದು ಮತ್ತುಗೌರವದಿಂದ ಕಾಣುವುದರ ಜೊತೆಗೆ ಅವರ ಕೆಲಸಗಳನ್ನು ವಿಳಂಬ ಮಾಡದೆ ಜರೂರಾಗಿ ಮಾಡಿಕೊಡುವುದು.

20/11/2018

(ಎಲ್.ಕೆ. ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಆಯುಕ್ತರು /ವ್ಯವಸ್ಥಾಪಕ ನಿರ್ದೇಶಕರುಗಳು / ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹ ಅಧಿಕಾರಿಗಳು,
3) ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು,
4) ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

<u>ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ</u>

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರು, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿರವರು.
4. ನಿರ್ದೇಶಕರು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ಮೊದಲನೆ ಮಹಡಿ, ವಿಧಾನ ಸೌಧ, ಬೆಂಗಳೂರು.
5. ಕಾರ್ಯಾಧ್ಯಕ್ಷರು, ಕರ್ನಾಟಕ ಪಂಚಾಯತ್ ಪರಿಷತ್, ನಂ.186/6, ಶಿರೂರು ಪಾರ್ಕ್ ರಸ್ತೆ, ಬೆಂಗಳೂರು.
6. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ / ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.